**All India Radio: Bangalore**
**National Bulletin In Kannada**
**09.07.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಆಸ್ಟ್ರೇಲಿಯಾದಿಂದ ಭಾರತಕ್ಕೆ ಯುರೇನಿಯಂ ಪೂರೈಕೆ ನಿಟ್ಟಿನಲ್ಲಿ ನಿರ್ಣಾಯಕ ಒಪ್ಪಂದಕ್ಕೆ ಉಭಯ ದೇಶಗಳು ಸಹಿ

೨. ದೇಶದ ಪಳೆಯುಳಿಕೇತರ ಇಂಧನ ಸಾಮರ್ಥ್ಯ ೨೯೭ ಗಿಗಾ ವ್ಯಾಟ್‌ಗೆ ಏರಿಕೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಕೇರಳಂ ನ ಕೊಚ್ಚಿಯಲ್ಲಿ ಬ್ರಿಕ್ಸ್ ಮಹಿಳಾ ಸಚಿವರ ಸಭೆ ಸಂಪನ್ನ

೪. ಫಿಫಾ ವಿಶ್ವಕಪ್ ಫುಟ್ಬಾಲ್: ಮೊದಲ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಫ್ರಾನ್ಸ್-ಮೊರಾಕೊ ಮುಖಾಮುಖಿ

---

ಮೆಲ್ಬೋರ್ನ್‌ನಲ್ಲಿ ಇಂದು ನಡೆದ ಮೂರನೇ ಆಸ್ಟ್ರೇಲಿಯಾ-ಭಾರತ ವಾರ್ಷಿಕ ನಾಯಕರ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಅವರು ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ನಿಯೋಗ ಮಟ್ಟದ ಮಾತುಕತೆಗಳನ್ನು ನಡೆಸಿದರು.

ಇಂಡೋ-ಪೆಸಿಫಿಕ್‌ನಾದ್ಯಂತ ಶಾಂತಿ ಮತ್ತು ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು, ರಕ್ಷಣಾ ಮತ್ತು ಭದ್ರತಾ ಸಹಕಾರದ ಕುರಿತು ಜಂಟಿ ಘೋಷಣೆಗೆ ಉಭಯ ನಾಯಕರು ಸಹಿ ಹಾಕಿದರು.

ಶೃಂಗಸಭೆಯ ನಂತರ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಆಸ್ಟ್ರೇಲಿಯಾ - ಚೈತನ್ಯಶೀಲ ಪ್ರಜಾಪ್ರಭುತ್ವಗಳು ಮತ್ತು ಪ್ರಮುಖ ಸಾಗರ ಶಕ್ತಿಗಳಾಗಿವೆ. ೨೦೨೨ ರ ಆರ್ಥಿಕ ಸಹಕಾರ ಮತ್ತು ವ್ಯಾಪಾರ ಒಪ್ಪಂದದ ಯಶಸ್ಸಿನ ಆಧಾರದ ಮೇಲೆ, ದ್ವಿಪಕ್ಷೀಯ ಹೂಡಿಕೆ ಒಪ್ಪಂದದ ಜೊತೆಗೆ ಸಮತೋಲಿತ, ಮಹತ್ವಾಕಾಂಕ್ಷೆಯ ಮತ್ತು ಪರಸ್ಪರ ಪ್ರಯೋಜನಕಾರಿ ಸಮಗ್ರ ಆರ್ಥಿಕ ಸಹಕಾರ ಒಪ್ಪಂದ ತ್ವರಿತಗೊಳಿಸಲು ಎರಡೂ ರಾಷ್ಟ್ರಗಳು ಬದ್ಧವಾಗಿವೆ ಎಂದು ಹೇಳಿದರು.

ಇದೇ ವೇಳೆ ಆಸ್ಟ್ರೇಲಿಯಾದಿಂದ ಭಾರತಕ್ಕೆ ದೀರ್ಘಾವಧಿಗೆ ಯುರೇನಿಯಂ ಪೂರೈಕೆ ನಿಟ್ಟಿನಲ್ಲಿ ನಿರ್ಣಾಯಕ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಇದು ಭಾರತದ ಶುದ್ಧ ಇಂಧನ ಉದ್ದೇಶಗಳಿಗೆ ಪ್ರಮುಖ ಬಲವನ್ನು ತುಂಬಲಿದೆ. ಇದು ನವೀಕರಿಸಬಹುದಾದ ಇಂಧನ ಪಾಲುದಾರಿಕೆಗೆ ಪೂರಕವಾಗಿದೆ. ಇದರ ಅಡಿಯಲ್ಲಿ ಎರಡೂ ರಾಷ್ಟ್ರಗಳು ಜಂಟಿಯಾಗಿ ಗುಜರಾತ್‌ನಲ್ಲಿ ರೂಫ್‌ಟಾಪ್ ಸೋಲಾರ್ ಟ್ರೈನಿಂಗ್ ಅಕಾಡೆಮಿಯನ್ನು ಸ್ಥಾಪಿಸಲಿವೆ.

ಇನ್ನೊಂದೆಡೆ, ಆಸ್ಟ್ರೇಲಿಯಾದ ವಿಶ್ವವಿದ್ಯಾಲಯ ತನ್ನ ಕ್ಯಾಂಪಸ್‌ಗಳನ್ನು ಬೆಂಗಳೂರು ಮತ್ತು ಗುರುಗ್ರಾಮ್‌ಗೆ ವಿಸ್ತರಿಸಿದೆ.

---

೨೧ ನೇ ಶತಮಾನದ ಭಾರತ, ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಗುರಿಯತ್ತ ಕೆಲಸ ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಮೆಲ್ಬೋರ್ನ್‌ನಲ್ಲಿ ಇಂದು ನಡೆದ ಸಮುದಾಯ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಇಂದಿನ ಭಾರತ, ಹೆಚ್ಚಿನದನ್ನು ಸಾಧಿಸುವುದರಲ್ಲಿ ನಂಬಿಕೆ ಹೊಂದಿರುವ ರಾಷ್ಟ್ರವಾಗಿದೆ. ವಿಶ್ವದ ಅತಿದೊಡ್ಡ ಕ್ರಿಕೆಟ್ ಕ್ರೀಡಾಂಗಣವನ್ನು ಹೊಂದಿರುವ ಅಹಮದಾಬಾದ್ ಮತ್ತು ಐಕಾನಿಕ್ ಕ್ರಿಕೆಟ್ ಮೈದಾನಕ್ಕೆ ಹೆಸರುವಾಸಿಯಾದ ಮೆಲ್ಬೋರ್ನ್, ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಪರ್ಕವನ್ನು ಸಂಕೇತಿಸುತ್ತದೆ ಎಂದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್, ಎರಡೂ ದೇಶಗಳ ಜನರ ಉತ್ಸಾಹ ಮತ್ತು ಚೈತನ್ಯವು ಭಾರತ-ಆಸ್ಟ್ರೇಲಿಯಾ ದ್ವಿಪಕ್ಷೀಯ ಸಂಬಂಧಗಳಲ್ಲಿ ಸಕಾರಾತ್ಮಕತೆ ಮತ್ತು ಭರವಸೆಯನ್ನು ಮುಂದುವರೆಸುತ್ತಿದೆ ಎಂದು ಹೇಳಿದರು.

---

ದೇಶದಲ್ಲಿ ಶುದ್ಧ ಇಂಧನ ಪರಿವರ್ತನೆ ಪ್ರಕ್ರಿಯೆ ವೇಗ ಪಡೆದುಕೊಳ್ಳುತ್ತಿದ್ದು, ಪಳೆಯುಳಿಕೇತರ ಇಂಧನ ಸಾಮರ್ಥ್ಯ ೨೬೭ ಗಿಗಾ ವ್ಯಾಟ್‌ಗೆ ಏರಿಕೆಯಾಗಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ನವೀಕರಿಸಬಹುದಾದ ಇಂಧನ ವಲಯದಲ್ಲಿ ಭಾರತ ಜಾಗತಿಕವಾಗಿ ಅಗ್ರ ಸ್ಥಾನದಲ್ಲಿದೆ. ಕಳೆದ ವರ್ಷ ಜೂನ್‌ನಲ್ಲಿ ೨೪೨ ಗಿಗಾ ವ್ಯಾಟ್ ನಷ್ಟಿದ್ದ ಪಳೆಯುಳಿಕೇತರ ಇಂಧನ ಸಾಮರ್ಥ್ಯ, ಇದೀಗ ೨೬೭ ಗಿಗಾ ವ್ಯಾಟ್‌ಗೆ ಹೆಚ್ಚಳವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಅವರು ತಿಳಿಸಿದ್ದಾರೆ.

ಸೌರಶಕ್ತಿ ಸಾಮರ್ಥ್ಯದಲ್ಲಿ ಭಾರತ ಮಹತ್ವದ ಸಾಧನೆ ಮಾಡುತ್ತಿದೆ. ಪಿಎಂ-ಸೂರ್ಯಘರ್, ಪಿಎಂ-ಕುಸುಮ್ ಯೋಜನೆ ಸೇರಿದಂತೆ ಸೌರಶಕ್ತಿ ಉತ್ಪಾದನೆಯಲ್ಲಿ ಮಹತ್ವದ ಮೈಲಿಗಲ್ಲು ದಾಖಲಿಸಲಾಗಿದೆ. ಪವನಶಕ್ತಿಯ ಸಾಮರ್ಥ್ಯದಲ್ಲೂ ಗಣನೀಯ ಹೆಚ್ಚಳವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ದೇಶದ ಶುದ್ಧ ಇಂಧನ ಪರಿವರ್ತನೆ, ಅಭೂತಪೂರ್ವ ವೇಗ ಪಡೆದುಕೊಂಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತ, ಇಂಧನ ವಲಯದಲ್ಲಿ ಆತ್ಮನಿರ್ಭರವಾಗುವತ್ತ ಹೆಜ್ಜೆ ಹಾಕಿದೆ. ಮುಂದಿನ ಪೀಳಿಗೆಗೆ ಹಸಿರು, ಸುಸ್ಥಿರ ಹಾಗೂ ಸುಭದ್ರ ಭಾರತ ನಿರ್ಮಾಣಕ್ಕೆ ಇದು ಪೂರಕವಾಗಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

---

ಸ್ಮಾರ್ಟ್‌ಫೋನ್, ಲ್ಯಾಪ್‌ಟಾಪ್ ಮತ್ತು ಸ್ಮಾರ್ಟ್ ಟಿವಿಗಳಂತಹ ವಿದ್ಯುನ್ಮಾನ ಸಾಧನಗಳ ದೇಶೀಯ ಉತ್ಪಾದನೆಯನ್ನು ಉತ್ತೇಜಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಡಿಸ್ಪ್ಲೇ ಅಸೆಂಬ್ಲಿ, ಲಿಥಿಯಂ ಅಯಾನ್ ಸೆಲ್ ಮತ್ತು ಇಂಡಕ್ಟರ್ ಕಾಯಿಲ್ ಮಾಡ್ಯೂಲ್ ತಯಾರಿಕೆಯಲ್ಲಿ ಬಳಸುವ ಸರಕುಗಳ ಮೇಲಿನ ಮೂಲ ಕಸ್ಟಮ್ಸ್ ಸುಂಕಕ್ಕೆ ಕೇಂದ್ರ ಸರ್ಕಾರ ವಿನಾಯಿತಿ ನೀಡಿದೆ.

ವಿದ್ಯುನ್ಮಾನ ಸಾಧನಗಳಲ್ಲಿ ಬಳಸುವ ಈ ಮೂರು ಪ್ರಮುಖ ಘಟಕಗಳ ತಯಾರಿಕೆಗೆ ಅಗತ್ಯವಾದ ವಸ್ತುಗಳ ಮೇಲಿನ ಮೂಲ ಕಸ್ಟಮ್ಸ್ ಸುಂಕ ವಿನಾಯಿತಿಗೆ ಸಂಬಂಧಿಸಿದಂತೆ ಹಣಕಾಸು ಸಚಿವಾಲಯ ಮೂರು ಪ್ರತ್ಯೇಕ ಅಧಿಸೂಚನೆಗಳನ್ನು ಹೊರಡಿಸಿದೆ.

ಉತ್ಪಾದನೆ ಆಧಾರಿತ ಪ್ರೋತ್ಸಾಹಧನ ಯೋಜನೆಯಡಿ ದೇಶೀಯ ವಿದ್ಯುನ್ಮಾನ ಉತ್ಪಾದನೆಯನ್ನು ಉತ್ತೇಜಿಸುವ ಸರ್ಕಾರದ ನೀತಿಗೆ ಅನುಗುಣವಾಗಿ ಈ ಕ್ರಮ ಕೈಗೊಳ್ಳಲಾಗಿದೆ.

ಈ ಸುಂಕ ವಿನಾಯಿತಿಯಿಂದ ಆಮದು ಮೇಲಿನ ಅವಲಂಬನೆ ಕಡಿಮೆಯಾಗುವುದರ ಜೊತೆಗೆ, ದೇಶೀಯ ಉತ್ಪಾದನೆಗೆ ಉತ್ತೇಜನ ದೊರೆತು ವಿದ್ಯುನ್ಮಾನ ಉತ್ಪಾದನಾ ಪರಿಸರ ವ್ಯವಸ್ಥೆ ಮತ್ತಷ್ಟು ಬಲಗೊಳ್ಳಲಿದೆ.

---

ಬ್ರಿಕ್ಸ್ ಮಹಿಳಾ ಸಚಿವರ ಸಭೆ ಇಂದು ಕೇರಳಂ ನ ಕೊಚ್ಚಿಯಲ್ಲಿ ಸಂಪನ್ನವಾಯಿತು.

ಸಮಾರೋಪ ಅಧಿವೇಶನ ಉದ್ದೇಶಿಸಿ ಮಾತನಾಡಿದ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ, ಬ್ರಿಕ್ಸ್ ಸದಸ್ಯರು, ಮಹಿಳಾ ಅಭಿವೃದ್ಧಿಗೆ ಸಂಬಂಧಿಸಿದ ಅನೇಕ ಕಾಳಜಿಯ ವಿಷಯಗಳನ್ನು ಹಂಚಿಕೊಂಡಿದ್ದಾರೆ. ಇದು ಸದಸ್ಯ ರಾಷ್ಟ್ರಗಳ ನಡುವೆ ಸಂವಾದ ಬೆಳೆಸುವಲ್ಲಿ ಮತ್ತು ಸಹಕಾರ ಬಲಪಡಿಸುವಲ್ಲಿ ಬ್ರಿಕ್ಸ್ ಮಹಿಳಾ ಸಚಿವರ ವೇದಿಕೆಗಳ ಪ್ರಾಮುಖ್ಯತೆಯನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು.

---

ಭಾರತ ಮತ್ತು ಅಫ್ಘಾನಿಸ್ತಾನ ಇಂದು ಮಾನವೀಯ ನೆರವು, ಅಭಿವೃದ್ಧಿ ಸಹಭಾಗಿತ್ವ, ಆಹಾರ ಭದ್ರತೆ, ಆರೋಗ್ಯ ಸೇವೆ, ಸಾಮರ್ಥ್ಯ ವೃದ್ಧಿ, ಶಿಕ್ಷಣ, ಕ್ರೀಡೆ, ವ್ಯಾಪಾರ, ವೀಸಾ ಹಾಗೂ ಸಂಪರ್ಕ ವ್ಯವಸ್ಥೆ ಸೇರಿದಂತೆ ಉಭಯ ದೇಶಗಳ ನಡುವಿನ ಸಮಗ್ರ ದ್ವಿಪಕ್ಷೀಯ ಸಂಬಂಧಗಳ ಕುರಿತು ಪರಿಶೀಲನೆ ನಡೆಸಿವೆ.

ಭಾರತ-ಅಫ್ಘಾನಿಸ್ತಾನ ಜಂಟಿ ಸಮಿತಿಯ ನಾಲ್ಕನೇ ಸುತ್ತಿನ ಸಭೆಯು ಇಂದು ನವದೆಹಲಿಯಲ್ಲಿ ನಡೆಯಿತು.

---

ಕಾರ್ಯತಂತ್ರದ ಕ್ಷೇತ್ರಗಳಿಗೆ ಅಗತ್ಯವಿರುವ ನಿರ್ಣಾಯಕ ಖನಿಜಗಳ ಬೇಡಿಕೆ ಕುರಿತು ನೀತಿ ಆಯೋಗ, ಪಾಲುದಾರರ ಸಮಾಲೋಚನಾ ಸಭೆಯನ್ನು ನವದೆಹಲಿಯಲ್ಲಿಂದು ಆಯೋಜಿಸಿತ್ತು.

ಸಭೆಯಲ್ಲಿ ಸರ್ಕಾರ, ಸಂಶೋಧನಾ ಸಂಸ್ಥೆಗಳು, ಶೈಕ್ಷಣಿಕ ವಲಯ ಹಾಗೂ ಕೈಗಾರಿಕಾ ಕ್ಷೇತ್ರದ ತಜ್ಞರು ಭಾಗವಹಿಸಿ, ಕಾರ್ಯತಂತ್ರದ ಹಾಗೂ ಉದಯೋನ್ಮುಖ ಕ್ಷೇತ್ರಗಳಿಗೆ ಭಾರತಕ್ಕೆ ಅಗತ್ಯವಿರುವ ನಿರ್ಣಾಯಕ ಖನಿಜಗಳ ಕುರಿತು ಸಮಗ್ರ ಚರ್ಚೆ ನಡೆಸಿದರು.

---

ಭಾರತಕ್ಕೆ ಎಲ್‌ಪಿಜಿ ಸಾಗಿಸುತ್ತಿದ್ದ ಟ್ಯಾಂಕರ್ ಮೇಲೆ ಇರಾನ್ ಕ್ಷಿಪಣಿ ದಾಳಿ ನಡೆಸಿದೆ ಎಂಬ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುದ್ದಿಯನ್ನು ಕೇಂದ್ರ ಸರ್ಕಾರ ತಳ್ಳಿಹಾಕಿದೆ.

ಈ ಸಂಬಂಧ ಪ್ರಸಾರವಾಗುತ್ತಿರುವ ಮಾಹಿತಿ ಸಂಪೂರ್ಣ ಸುಳ್ಳು ಎಂದು ಕೇಂದ್ರ ವಾರ್ತಾ ಶಾಖೆಯ ಸತ್ಯಶೋಧನಾ ಘಟಕ ಸ್ಪಷ್ಟಪಡಿಸಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಲಾಗುತ್ತಿರುವ ಚಿತ್ರವು ಹಳೆಯದಾಗಿದ್ದು, ಕಳೆದ ವರ್ಷ ಯೆಮೆನ್‌ನ ಏಡನ್ ಕರಾವಳಿ ಸಮೀಪ ಸ್ಫೋಟದ ನಂತರ ಕ್ಯಾಮರೂನ್ ಧ್ವಜ ಹೊಂದಿದ್ದ ಎಂ.ವಿ.ಫಾಲ್ಕನ್ ಎಲ್‌ಪಿಜಿ ಟ್ಯಾಂಕರ್‌ನಲ್ಲಿ ಸಂಭವಿಸಿದ ಅಗ್ನಿ ಅವಘಡಕ್ಕೆ ಸಂಬಂಧಿಸಿದೆ ಎಂದು ಪಿಐಬಿ ತಿಳಿಸಿದೆ.

---

ಜಮ್ಮು-ಕಾಶ್ಮೀರದ ಪೂಂಚ್ ಜಿಲ್ಲೆಯ ಪ್ರದೇಶಗಳಿಗೆ ಭಾರತೀಯ ಭೂಸೇನಾ ಮುಖ್ಯಸ್ಥ ಜನರಲ್ ಧೀರಜ್ ಸೇಠ್ ಭೇಟಿ ನೀಡಿ, ಪ್ರಸ್ತುತ ಭದ್ರತಾ ಪರಿಸ್ಥಿತಿ, ಕಾರ್ಯಾಚರಣಾ ಸನ್ನದ್ಧತೆ ಹಾಗೂ ಯೋಧರ ಯುದ್ಧ ಸಿದ್ಧತೆಯ ಪರಿಶೀಲನೆ ನಡೆಸಿದರು.

ಭೂಸೇನಾ ಮುಖ್ಯಸ್ಥರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಪೂಂಚ್‌ನ ಪ್ರದೇಶಗಳಿಗೆ ಅವರು ಮೊದಲ ಬಾರಿಗೆ ಭೇಟಿ ನೀಡಿದ್ದಾರೆ. ಈ ವೇಳೆ ಅವರು ಸೇನಾ ಘಟಕಗಳ ಕಾರ್ಯಾಚರಣಾ ಸನ್ನದ್ಧತೆ ಕುರಿತು ಹಿರಿಯ ಸೇನಾ ಅಧಿಕಾರಿಗಳಿಂದ ಮಾಹಿತಿ ಪಡೆದರು.

---

ಇಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್-ಎಬಿವಿಪಿ ಸಂಸ್ಥಾಪನಾ ದಿನ. ಈ ಹಿನ್ನೆಲೆಯಲ್ಲಿ, ಬಿಜೆಪಿ ಹಿರಿಯ ನಾಯಕ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಎಲ್ಲ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದ್ದಾರೆ.

---

ಬೋಸ್ಟನ್‌ನಲ್ಲಿ ನಡೆಯುವ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಮೊದಲ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಫ್ರಾನ್ಸ್ ತಂಡ, ಮೊರಾಕೊ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯರಾತ್ರಿ ೧.೩೦ಕ್ಕೆ ಆರಂಭವಾಗಲಿದೆ.

ಎರಡನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಸ್ಪೇನ್ ತಂಡ, ಬೆಲ್ಜಿಯಂ ಅನ್ನು ಎದುರಿಸಲಿದೆ. ಉಳಿದ ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ, ನಾರ್ವೆ ತಂಡ, ಇಂಗ್ಲೆಂಡ್ ವಿರುದ್ಧ ಆಡಲಿದ್ದು, ಹಾಲಿ ಚಾಂಪಿಯನ್ ಅರ್ಜೆಂಟೀನಾ, ಭಾನುವಾರ ಬೆಳಗ್ಗೆ ಸ್ವಿಟ್ಜರ್ಲೆಂಡ್ ತಂಡದ ವಿರುದ್ಧ ಸೆಣಸಲಿದೆ.

---

ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ನಾಲ್ಕನೇ ಪಂದ್ಯ ಇಂದು ಬ್ರಿಸ್ಟಲ್‌ನ ಕೌಂಟಿ ಮೈದಾನದಲ್ಲಿ ನಡೆಯಲಿದೆ.

ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦ ಗಂಟೆಗೆ ಆರಂಭವಾಗಲಿದೆ

---

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೨೩೮ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೬ ಸಾವಿರದ ೭೪೨ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೮೧ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೬೭೩ ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೯೫ ರೂಪಾಯಿ ೩೮ ಪೈಸೆಯಷ್ಟಾಗಿದೆ.

__________ ಮುಕ್ತಾಯ __________